# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 8(19) |
| ಸದಸ್ಯರ ಹೆಸರು | : | ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 11.08.2025 |
| ಉತ್ತರಿಸುವವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆ, ಲಿಂಗಸಗೂರು ಪಟ್ಟಣದ ಪದವಿ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಲಿಂಗಸಗೂರು ಈ ಕಾಲೇಜಿನಲ್ಲಿ, 2025-26ನೇ ಸಾಲಿನಿಂದ ಹೊಸದಾಗಿ ಎಂ.ಎ (ಕನ್ನಡ), ಎಂ.ಎ (ಇತಿಹಾಸ), ಎಂ.ಎ (ಅರ್ಥಶಾಸ್ತ್ರ), ಎಂ.ಎ (ರಾಜ್ಯಶಾಸ್ತ್ರ), ಎಂ.ಎ(ಇಂಗ್ಲೀಷ್), ಎಂ.ಕಾಂ, ಎಂ.ಎಸ್ಸಿ (ಗಣಿತಶಾಸ್ತ್ರ) ಹಾಗೂ ಎಂ.ಎಸ್ಸಿ (ಗಣಕವಿಜ್ಞಾನ) ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ಪ್ರಸ್ತಾವನೆ ಸ್ವೀಕೃತಗೊಂಡಿರುತ್ತದೆ. |
| ಆ) | ಹಾಗಿದ್ದಲ್ಲಿ, ಯಾವ ಯಾವ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ಕ್ರಮ ವಹಿಸಲಾಗಿದೆ; | ಪ್ರಸ್ತುತ ಇರುವಂತಹ ಪದವಿ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳನ್ನು ತೆರೆಯಲು ಸಂಶೋಧನೆಗೆ ಸಂಬಂಧಪಟ್ಟಂತಹ ಸಂಪನ್ಮೂಲಗಳು, ಪ್ರಯೋಗಾಲಯ, Research Activities, Industrial visitsಗಳಿಗೆ ಬೇಕಾಗುವಂತಹ ಸಮರ್ಪಕ ಸೌಲಭ್ಯಗಳ ಕೊರತೆ ಇರುವುದನ್ನು ಮನಗಂಡು ಹಾಗೂ ಪ್ರಸ್ತುತ ಇರುವ ಪದವಿ ಕೋರ್ಸ್‌ಗಳನ್ನೆ ಬಲಪಡಿಸಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುವ ದೃಷ್ಟಿಯಿಂದ ಪದವಿ ಕೋರ್ಸ್‌ಗಳಿಗೆ ಹೆಚ್ಚಿನ ಗಮನ ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕಳೆದ 5 (ಐದು) ವರ್ಷಗಳಿಂದ ಯಾವುದೇ ಪದವಿ ಕಾಲೇಜುಗಳಿಗೆ ಹೊಸದಾಗಿ ಸ್ನಾತಕೋತ್ತರ ಕೋರ್ಸ್‌ಗಳನ್ನು ತೆರೆಯಲು ಅನುಮತಿ ನೀಡಿರುವುದಿಲ್ಲ. |
| ಇ) | ಇಲ್ಲದಿದ್ದಲ್ಲಿ, ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ಇರುವ ತೊಡಕುಗಳೇನು? (ವಿವರಿಸುವುದು) | |

**ಸಂಖ್ಯೆ:ಇಡಿ 316 ಡಿಸಿಇ 2025(ಇ)**

(ಡಾ. ಎಂ. ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು